ಕಡೂರು ಡಿಸ್ಟ್ರಿಕ್ಟು ಸಬಾರ್ಡಿನೇಟ್ ಜಡ್ಜ್‌ರವರ ಕೋರ್ಟಿನಿಂದ.

1884ನೇ ಇಸವಿ ಮಿಸಲೇನಿಯಸ್ ಕೇಸ್ ನಂಬರ್ 15.

ಮೃತಪಟ್ಟು ಬೇಲೂರ ತಾಲ್ಲೂಕು ಅರೇಹಳ್ಳಿ ಮಾಗಣಿ ಶಿದ್ದರಹಳ್ಳಿ ಪೇಟೆ ನಿರ್ವಾಣ ಶಟ್ಟಯ ಆಸ್ತಿ ವಿಷಯದಲ್ಲಿ—

ಅರ್ಜೀದಾರ ರುದ್ರಶಟ್ಟಿಯು, ಮೃತಪಟ್ಟು ನಿರ್ವಾಣಶಟ್ಟಿಯು ತಮ್ಮ ಆಗಬೇಕೆಂಬ ಹಕ್ಕುದಾರಿ ಮೇಲೆ ಶಿದ್ದರಹಳ್ಳಿ ಪೇಟೆಲಿರುವ ರುದ್ರಶಟ್ಟಿಯು ಶಿದ್ದರಹಳ್ಳಿ ಪೇಟೆ ವಾಸಸ್ಥನಾಗಿ ಮೃತಪಟ್ಟು ನಿರ್ವಾಣ ಶಟ್ಟಿಯ ಜೆಂದಗಿ ಬಗ್ಯಾಗಿ ಬರತಕ್ಕ ಸಾಲವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾನೆ.

ಸದರೀ ದರಖಾಸ್ತುದಾರನಾದ ರುದ್ರಶಟ್ಟಿಯ ಅರ್ಜಿಯನ್ನು ಸ್ಯ 1884ನೇ ಇಸವಿ ಮಾರ್ಚೀ 27ರಲ್ಲಿ ಕೇಳಿ ಸರಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟು ನಿರ್ವಾಣಶಟ್ಟಿ ಆಸ್ತಿಗೆ ಹಕ್ಕುದಾರರಾದ ವಿಸ್ಪರೂ ಈ ಕೋರ್ಟಿನಲ್ಲಿ ಹಾಜರ್ ಯಿರಬೇಕೆಂದು ಇದರಿಂದ ತಿಳಿಯಪಡಿಸಿ ಯಿದೆ.

1884ನೇ ಇಸವಿ ಫಿಬ್ರವರೀ 18ನೇ ತಾರೀಖಿನಲ್ಲಿ ಕೋರ್ಟು ಮೊಹರಿನಿಂ ನಮ್ಮ ದಸ್ತಖತ್ತೊಡನೆ ಕೊಡೋಣಾಗಿದೆ.

1884ನೇ ಇಸವಿ ಮಿಸಲೇನಿಯಸ್ ನಂಬರ್ 21.

ಮೃತಪಟ್ಟು ಚಿಕ್ಕಮಗಳೂರು ತಾ|| ಕಳವಾನಿ ಪಟೇಲ್ ಶಿದ್ದೇಗವ್ವಡನ ಆಸ್ತೀ ವಿಷಯದಲ್ಲಿ—

ಅರ್ಜೀದಾರ ಮಲ್ಲೇಗವ್ವಡನು, ಮೃತಪಟ್ಟು ಸದರೀ ಶಿದ್ದೇಗವ್ವಡನು ಅಂಣನಾಗಬೇಕೆಂಬ ಹಕ್ಕುದಾರಿಮೇಲೆ ಕಳವಾನೇ ಮಲ್ಲೇಗವ್ವಡನು ಸದರೀ ವಾಸಸ್ಥನಾಗಿ ಮೃತಪಟ್ಟು ಶಿದ್ದೇಗವ್ವಡನ ಜೆಂದಗಿ ಬಗ್ಯಾಗಿ ಬರತಕ್ಕ ಸಾಲವನ್ನು ವಸೂಲ್ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರ್ಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾನೆ.

ಸದರೀ ದರಖಾಸ್ತುದಾರನಾದ ಮಲ್ಲೇಗವ್ವಡನ ಅರ್ಜಿಯನ್ನು 1884ನೇ ಇಸವೀ ಏಪ್ರಲ್ ತಿಂಗಳು ತಾರೀಖು 3ರಲ್ಲು ಕೇಳಿ ಸರ್ಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟು ಶಿದ್ದೇಗವ್ವಡನ ಆಸ್ತಿಗೆ ಹಕ್ಕುದಾರರಾದ ವಿಸ್ಪರೂ ಈ ಕೋರ್ಟನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1884ನೇ ಇಸವಿ ಫಿಬ್ರವರೀ ತಿಂಗಳು 26ನೇ ತಾರೀಖಿನಲ್ಲಿ ಕೋರ್ಟು ಮೊಹರ್ ಮತ್ತು ನಮ್ಮ ದಸ್ತಖತ್ತೊಡನೆ ಕೊಡೋಣಾಗಿದೆ.

1884ನೇ ಇಸವಿ ಮಿಸಲೇನಿಯಸ್ ಕೇಸ್ ನಂಬರ್ 22.

ಮೃತಪಟ್ಟು ಚಿಕ್ಕಮಗಳೂರು ಟವ್ನ ಮಳಲೂರು ಹುಸೇನ್‌ಸಾಬಿ ಆಸ್ತಿ ವಿಷಯದಲ್ಲಿ—

ಅರ್ಜೀದಾರ ಮಿನ್ನಿ ಹೈದರಸಾಹೆಬನು, ಮೃತಪಟ್ಟು ಹುಸೇನ್‌ಸಾಬಿಯು ಪಾಲದಾರ ಮತ್ತು ಭಾವನಾಗಬೇಕೆಂಬ ಹಕ್ಕುದಾರಿ ಮೇಲೆ ಚಿಕ್ಕಮಗಳೂರು ಟವನ್ನಲ್ಲಿ ವಾಸಸ್ಥನಾಗಿ ಮೃತಪಟ್ಟು ಹುಸೇನ್‌ಸಾಬಿಯ ಜೆಂದಗೀ ಬಗ್ಯಾಗಿ ಬರತಕ್ಕ ಸಾಲನನ್ನು ವಸೂಲ್ ಮಾಡವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರಟಿಫಿಕೇಟ್ ಬಗ್ಯೆ ಈಕೋರ್ಟಿಗೆ ಖಾಯಿಷ್ ಮಾಡಿರುತ್ತಾನೆ.

ಸದರೀ ದರಖಾಸ್ತುದಾರನಾದ ಹೈದರಸಾಬನ ಅರ್ಜಿಯನ್ನು 1884ನೇ ಇಸವಿ ಏಪ್ರೆಲ್ 3ರಲ್ಲು ಕೇಳಿ ಸರಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟು ಹುಸೇನ್‌ಸಾಹೆಬನ ಆಸ್ತಿಗೆ ಹಕ್ಕುದಾರರಾದ ವಿಸ್ಪರೂ ಈ ಕೋರ್ಟಿನಲ್ಲಿ ಹಾಜರ್ ಯಿರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1884ನೇ ಇಸವಿ ಫಿಬ್ರವರೀ ತಿಂಗಳು ತಾರೀಖು 28ರಲ್ಲು ಕೋರ್ಟು ಮೊಹರ್ ಮತ್ತು ನಮ್ಮ ದಸ್ತಖತ್ತೊಡನೆ ಕೊಡೋಣಾಗಿದೆ.

1884ನೇ ಇಸವಿ ಮಿಸಲೇನಿಯಸ್ ನಂಬರ್ 27.

ಮೃತಪಟ್ಟು ಬೇಲೂರು ತಾಲ್ಲೂಕು ಅರೇಹಳ್ಳಿ ಪೇಟೆ ರುದ್ರಪ್ಪಶಟ್ಟಿ ಆಸ್ತೀ ವಿಷಯದಲ್ಲಿ—

ಅರ್ಜೀದಾರ ಬೆಂಣೀ ಕಲ್ಯಾಣಪ್ಪಶಟ್ಟಿ ಮಗ ಶಾಂತವೀರಪ್ಪಶಟ್ಟಿಯು, ಮೃತಪಟ್ಟು ರುದ್ರಪ್ಪಶಟ್ಟಿಗೆ ತಮ್ಮ ಆಗಬೇಕೆಂಬ ಹಕ್ಕುದಾರಿ ಮೇಲೆ ಅರೇಹಳ್ಳಿ ಪೇಟೆ ಶಾಂತವೀರಪ್ಪಶಟ್ಟಿಯು, ಅರೇಹಳ್ಳಿ ವಾಸಸ್ಥನಾಗಿ ಮೃತಪಟ್ಟು ರುದ್ರಶಟ್ಟಿ ಜೆಂದಗಿ ಬಗ್ಯಾಗಿ ಬರತಕ್ಕ ಸಾಲವನ್ನು ವಸೂಲ್ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರ್ಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್‌ಮಾಡಿ ಇರುತ್ತಾನೆ.

ಸದರೀ ದರಖಾಸ್ತುದಾರನಾದ ಶಾಂತವೀರಪ್ಪಶಟ್ಟಿಯ ಅರ್ಜಿಯನ್ನು 1884ನೇ ಇಸವಿ ಏಪ್ರೆಲ್ ತಿಂಗಳು ತಾರೀಖು 7ರಲ್ಲು ಕೇಳಿ ಸರ್ಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತ. ಆ ಕಾಲದಲ್ಲಿ ಸದರೀ ಮೃತಪಟ್ಟು ರುದ್ರಶಟ್ಟಿ ಆಸ್ತಿಗೆ ಹಕ್ಕುದಾರರಾದ ವಿಸ್ಪರೂ ಈ ಕೋರ್ಟಿನಲ್ಲಿ ಹಾಜರು ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1884ನೇ ಇಸವಿ ಮಾರ್ಚೀ ತಿಂಗಳು 5ನೇ ತಾರೀಖಿನಲ್ಲಿ ಕೋರ್ಟು ಮೊಹರಿನಿಂ ನಮ್ಮ ದಸ್ತಖತ್ತೊಡನೆ ಕೊಡೋಣಾಗಿದೆ.

ಬಿ. ತಿರುಮಲಾಚಾರಿ,
ಸಬ್ ಜಡ್ಜ್.